ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗಾಗಿ ಅನುಷ್ಠಾನಗೊಳಿಸುತ್ತಿರುವ ವಿದ್ಯಾಸಿರಿ–ಊಟ ಮತ್ತು ವಸತಿ ಸಹಾಯ ಯೋಜನೆ ಕಾರ್ಯಕ್ರಮದ ಮಂಜೂರಾತಿ ಹಾಗೂ ಅನುಷ್ಠಾನದ ಬಗ್ಗೆ ಮಾರ್ಗಸೂಚಿಗಳನ್ನು ಮಾರ್ಪಡಿಸುವ ಬಗ್ಗೆ

ಓದಲಾಗಿದೆ: 1. ಸರ್ಕಾರಿ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 516 ಬಿಎಂಎಸ್ 2013 ಬೆಂಗಳೂರು ದಿನಾಂಕ 24/09/2013

2. ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ : ಹಿಂವಕ 516 ಬಿಎಂಎಸ್ 2013 ದಿನಾಂಕ 27/01/2014, 20/02/2014 & 03/11/2014

3. ಸರ್ಕಾರದ ಆದೇಶ ಸಂಖ್ಯೆ : ಹಿಂವಕ 720 ಬಿಎಂಎಸ್ 2013 ಬೆಂಗಳೂರು ದಿನಾಂಕ 17/12/2013

4. ಸರ್ಕಾರದ ಆದೇಶ ಸಂಖ್ಯೆ : ಹಿಂವಕ 803 ಬಿಎಂಎಸ್ 2015 ಬೆಂಗಳೂರು ದಿನಾಂಕ 19/08/2015

5. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಏಕ ಕಡತ ಪ್ರಸ್ತಾವನೆ ಸಂಖ್ಯೆ : ಹಿಂವಕಇ/ ವಿವೇಶಾ/ಸಿಆರ್–30/2016–17 ದಿನಾಂಕ : 01/08/2016

******

ಪ್ರಸ್ತಾವನೆ:

ಮೇಲೆ ಓದಲಾದ ಕ್ರ.ಸಂ. (1) ರ ಆದೇಶದಲ್ಲಿ ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳ ಪ್ರವೇಶಕ್ಕಾಗಿ ಅತೀ ಹೆಚ್ಚಿನ ಬೇಡಿಕೆ ಇರುವುದರಿಂದ ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶ ದೊರಕದ ಹಾಗೂ ಮೆರಿಟ್ ಹೊಂದಿರುವ ವಿದ್ಯಾರ್ಥಿಗಳಿಗೆ ಪ್ರತಿ ವಿದ್ಯಾರ್ಥಿಗೆ ಮಾಹೆಯಾನ ರೂ. 1500/– ರಂತೆ ಶೈಕ್ಷಣಿಕ ಅವಧಿಯ 10 ಮಾಹೆಗಳಿಗೆ ಒಟ್ಟು ರೂ.15,000/– ಗಳನ್ನು ಅವರ ಬ್ಯಾಂಕ್ ಖಾತೆಗಳಿಗೆ ಆನ್ ಲೈನ್ ಮುಖಾಂತರ ಜಮಾ ಮಾಡುವ ವಿದ್ಯಾಸಿರಿ–ಊಟ ಮತ್ತು ವಸತಿ ಸಹಾಯ ಯೋಜನೆಯನ್ನು ಜಾರಿ ಮಾಡಿದ್ದು, ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ತಿದ್ದುಪಡಿ ಆದೇಶಗಳನ್ನು ಹೊರಡಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ಆದೇಶದಲ್ಲಿ ಊಟ ಮತ್ತು ವಸತಿ ಸಹಾಯ ಯೋಜನೆಗಾಗಿ ಅರ್ಜಿ ಸಲ್ಲಿಸುವ ಎಲ್ಲಾ ಅರ್ಹ ಅಲೆಮಾರಿ/ಅರೆಅಲೆಮಾರಿ ಜನಾಂಗದ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ಧನ ಸಹಾಯ ಮಂಜೂರು ಮಾಡಲು 2015–16 ನೇ ಸಾಲಿನಿಂದ ಜಾರಿಗೆ ಬರುವಂತೆ ಆದೇಶಿಸಲಾಗಿದೆ. ಮೇಲೆ ಓದಲಾದ ಕ್ರಮ ಸಂಖ್ಯೆ (4) ರ ಆದೇಶದಲ್ಲಿ ಅಲೆಮಾರಿ ಅರೆಅಲೆಮಾರಿ ಜನಾಂಗದ ವಿದ್ಯಾರ್ಥಿಗಳು ಹಾಗೂ ಇತರೆ ಪ್ರವರ್ಗಗಳ ವಿದ್ಯಾರ್ಥಿಗಳಿಗೆ ಅನುದಾನ ಹಂಚಿಕೆಯ ಅನುಪಾತವನ್ನು ನಿಗದಿಪಡಿಸಿ ಆದೇಶ ಹೊರಡಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (5) ರಲ್ಲಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರು, ವಿದ್ಯಾಸಿರಿ–ಊಟ ಮತ್ತು ವಸತಿ ಸಹಾಯ ಯೋಜನೆಯಡಿ ಅನುದಾನ ಮಂಜೂರು ಮಾಡಲು ಅರ್ಹ ವಿದ್ಯಾರ್ಥಿಗಳಿಗೆ ಆದ್ಯತೆಗಳನ್ನು ನಿರ್ಣಯಿಸಲು ಹಾಗೂ ವಿಕಲಚೇತನರಿಗೆ ಮತ್ತು ವಿದ್ಯಾರ್ಥಿನಿಯರಿಗೆ ಮೀಸಲಾತಿ ಅನುಪಾತವನ್ನು ನಿಗದಿಪಡಿಸಿ ಆದೇಶ ಹೊರಡಿಸುವಂತೆ ಕೋರಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

.....2

ಈ ಎಲ್ಲಾ ಅಂಶಗಳ ಹಿನ್ನೆಲೆಯಲ್ಲಿ ಮೇಲೆ ಓದಲಾದ ಎಲ್ಲಾ ಆದೇಶಗಳನ್ನು ನಿರಸನಗೊಳಿಸಿ ಅನುಬಂಧದಲ್ಲಿರುವಂತೆ ಮಾರ್ಗಸೂಚಿಗಳೊಂದಿಗೆ ಆದ್ಯತೆಗಳನ್ನು ಹಾಗೂ ಮೀಸಲಾತಿಯನ್ನು ನಿಗದಿಪಡಿಸಿ ಆದೇಶವನ್ನು ಹೊರಡಿಸಬೇಕಾಗಿದ್ದು ಅದರಂತೆ ಈ ಆದೇಶ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ ಸಂ.ಹಿಂವಕ 662 ಬಿಎಂಎಸ್ 2016, ಬೆಂಗಳೂರು**
**ದಿನಾಂಕ:04.10.2016**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಮೇಲೆ ಓದಲಾದ ಎಲ್ಲಾ ಆದೇಶಗಳನ್ನು ನಿರಸನಗೊಳಿಸಿ (Supersession) ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ಈ ಆದೇಶದ ಅನುಬಂದದಲ್ಲಿರುವ ಮಾರ್ಗಸೂಚಿಗಳ ಪ್ರಕಾರ ವಿದ್ಯಾಸಿರಿ – ಊಟ ಮತ್ತು ವಸತಿ ಸಹಾಯ ಯೋಜನೆ ಕಾರ್ಯಕ್ರಮವನ್ನು ಜಾರಿಗೊಳಿಸಲು ಆದೇಶಿಸಿದೆ.

ಈ ಯೋಜನೆಯಡಿ ಸೌಲಭ್ಯವನ್ನು ಆಯಾ ಆರ್ಥಿಕ ವರ್ಷದಲ್ಲಿ ಲಭ್ಯವಿರುವ ಅನುದಾನದ ಮಿತಿಗೆ ಒಳಪಟ್ಟು ಮಂಜೂರು ಮಾಡತಕ್ಕದ್ದು. ಈ ಯೋಜನೆಗೆ ತಗಲುವ ವೆಚ್ಚವನ್ನು ರಾಜ್ಯ ವಲಯ ಯೋಜನೆ ಲೆಕ್ಕಶೀರ್ಷಿಕೆ :2225-03-283-0-03 ರಡಿ ಒದಗಿಸುವ ಅನುದಾನದಲ್ಲಿ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:ಎಫ್‌ಡಿ 03 ಟಿಎಫ್‌ಪಿ 2016 ದಿನಾಂಕ:02.04.2016ರಲ್ಲಿ ಸರ್ಕಾರದ ಕಾಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ
(ಆರ್.ಭಾಸ್ಕರ್)
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

ಇವರಿಗೆ:-

ಕರ್ನಾಟಕ ರಾಜ್ಯಪತ್ರದ ಸಂಕಲನಕಾರರು, ಬೆಂಗಳೂರು ಇವರಿಗೆ ಕರ್ನಾಟಕ ರಾಜ್ಯಪತ್ರದ ಮುಂದಿನ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ 10000 ಪ್ರತಿಗಳನ್ನು ನೇರವಾಗಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಕಳುಹಿಸಿಕೊಡತಕ್ಕದ್ದು.

ಗೆ,

1. ಮಹಾಲೇಖಪಾಲರು, (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯೋಜನಾ ಇಲಾಖೆ, ಬಹುಮಹಡಿ ಕಟ್ಟಡ,ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
7. ಸರ್ಕಾರದ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ, ವಿಕಾಸಸೌಧ, ಬೆಂಗಳೂರು.

8. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
9. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ
10. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ
11. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳಿಗೆ

(8–11: ಆಯುಕ್ತರು, ಹಿಂ.ವ.ಕ.ಇಲಾಖೆಯ ಮುಖಾಂತರ)

12. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು.
13. ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
14. ಸರ್ಕಾರದ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
15. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರು.
16. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ(ವೆಚ್ಚ-3), ವಿಧಾನಸೌಧ, ಬೆಂಗಳೂರು.
17. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಸರ್ಕಾರದ ಆದೇಶ ಸಂಖ್ಯೆ :ಬಿಸಿಡಬ್ಲ್ಯೂ 662 ಬಿಎಂಎಸ್ 2016 ದಿನಾಂಕ:04.10.2016ಕ್ಕೆ ಅನುಬಂಧ

**ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ಊಟ ಮತ್ತು ವಸತಿ ಸಹಾಯ ಯೋಜನೆ ಕಾರ್ಯಕ್ರಮ ಅನುಷ್ಠಾನದ ಮಾರ್ಗಸೂಚಿಗಳು :-**

**( ಸಮಾಜ ಕಲ್ಯಾಣ/ ಪರಿಶಿಷ್ಟ ವರ್ಗಗಳ ಕಲ್ಯಾಣ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗಳ ವ್ಯಾಪ್ತಿಗೆ ಬರುವ ವಿದ್ಯಾರ್ಥಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಸೌಲಭ್ಯಗಳನ್ನು ಪಡೆಯಲು ಅರ್ಹರಿರುವುದಿಲ್ಲ)**

## 1. ಯೋಜನೆಯ ಉದ್ದೇಶ :-

ಅ). ಯಾವುದೇ ಇಲಾಖೆಯ ಸರ್ಕಾರಿ/ ಸರ್ಕಾರಿ ಅನುದಾನಿತ ವಿದ್ಯಾರ್ಥಿ ನಿಲಯ/ ವಸತಿ ಕಾಲೇಜುಗಳಲ್ಲಿ ಪ್ರವೇಶ ದೊರೆಯದ ಹಾಗೂ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುವ, ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಊಟ ಮತ್ತು ವಸತಿ ಸಹಾಯವನ್ನು ಒದಗಿಸುವುದು. ಈ ಯೋಜನೆಯ ಉದ್ದೇಶ.

ಆ). ಈ ಯೋಜನೆಯಡಿ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಪ್ರತಿ ತಿಂಗಳಿಗೆ ರೂ. 1,500/- ರಂತೆ ಶೈಕ್ಷಣಿಕ ವರ್ಷದ 10 ತಿಂಗಳಿಗೆ ಒಟ್ಟು ರೂ. 15,000/- ಗಳ ಸಹಾಯಧನವನ್ನು ಇತರೆ ನಿಬಂಧನೆಗೊಳಪಟ್ಟು ಅವರ ಯಾವುದಾದರೂ ಕೋರ್ ಬ್ಯಾಂಕಿಂಗ್ ವ್ಯವಸ್ಥೆ ಇರುವ ಬ್ಯಾಂಕಿನಲ್ಲಿ ತೆರೆದಿರುವ ಬ್ಯಾಂಕ್ ಖಾತೆಗೆ ಆನ್ ಲೈನ್ ( ಆರ್.ಟಿ.ಜಿ.ಎಸ್. ) ಮೂಲಕ ಜಮಾ ಮಾಡಲಾಗುವುದು.

ಇ). ವಿದ್ಯಾರ್ಥಿಗಳು ಕೆಳಕಂಡ ಯಾವುದಾದರೂ ಒಂದು ಸೌಲಭ್ಯವನ್ನು ಮಾತ್ರ ಪಡೆಯಬಹುದು.

1. ವಿದ್ಯಾರ್ಥಿ ನಿಲಯದಲ್ಲಿ ಪ್ರವೇಶ
2. ಊಟ ಮತ್ತು ವಸತಿ ಸಹಾಯ ಯೋಜನೆ
3. ಮೆಟ್ರಿಕ್ ನಂತರದ ವಿಧ್ಯಾರ್ಥಿ ವೇತನ

ಈ). ಈ ಯೋಜನೆಯಡಿ ಸೌಲಭ್ಯ ಪಡೆಯಲು ಅರ್ಹರಾದವರು ಆನ್ ಲೈನ್ ( Online ) ಮೂಲಕ ಅರ್ಜಿ ಸಲ್ಲಿಸಬೇಕು.

## II. ಅರ್ಹತೆ

1. (ಅ). ಭಾರತದ ಪ್ರಜೆಯಾಗಿದ್ದು, ಕರ್ನಾಟಕದ ಖಾಯಂ ನಿವಾಸಿ ಆಗಿರಬೇಕು.
   (ಆ). ಭಾರತ ಸರ್ಕಾರ ಹಾಗೂ ರಾಜ್ಯ ಸರ್ಕಾರ ಅಧಿಸೂಚಿಸಿರುವ, ಇತರೆ ಹಿಂದುಳಿದ ವರ್ಗಗಳ ಪಟ್ಟಿಯಲ್ಲಿ ಸೇರಿರಬೇಕು
   (ಇ). ಕರ್ನಾಟಕ ಶಾಸನಬದ್ದ ವಿಶ್ವವಿದ್ಯಾಲಯಗಳ ಅಧೀನಕ್ಕೆ ಒಳಪಡುವ, ಸರ್ಕಾರಿ/ ಸ್ಥಳೀಯ ಸಂಸ್ಥೆ/ ಅನುದಾನಿತ ಸಂಸ್ಥೆಗಳು/ ಮಾನ್ಯತೆ ಪಡೆದ ಅನುದಾನ ರಹಿತ ಖಾಸಗಿ ಸಂಸ್ಥೆಗಳಲ್ಲಿ – ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಾಗಿರಬೇಕು.
2. (ಅ). ಈ ಮೇಲಿನ ಸೌಲಭ್ಯ ಪಡೆಯಲು ವಿದ್ಯಾರ್ಥಿಯ ತಂದೆ- ತಾಯಿ / ಪೋಷಕರ ಕುಟುಂಬದ ಒಟ್ಟು ವಾರ್ಷಿಕ ಆದಾಯ ( Gross Annual Income) ಈ ಕೆಳಗೆ ನಿಗದಿಪಡಿಸಿದ ಮಿತಿಯೊಳಗೆ ಇರಬೇಕು.

   (i). ಪ್ರವರ್ಗ-1ರ ವಿದ್ಯಾರ್ಥಿಗಳಿಗೆ ರೂ.2.50ಲಕ್ಷ

   (ii) ಪ್ರವರ್ಗ-2ಎ, 3ಎ ಮತ್ತು 3ಬಿ ವಿದ್ಯಾರ್ಥಿಗಳಿಗೆ ರೂ.1.00ಲಕ್ಷ

ಆರ್. ಶಂಕರ್

(ಅ) ವಿದ್ಯಾರ್ಥಿಗಳು ಗ್ರಾಮೀಣ ಪ್ರದೇಶದವರಾಗಿರಬೇಕು. ಹಾಗೂ ವ್ಯಾಸಂಗ ಮಾಡುವ ಕಾಲೇಜಿನಿಂದ ಕನಿಷ್ಠ 5 ಕಿ.ಮೀ.ದೂರದವರಾಗಿರಬೇಕು. ಆದರೆ, ವಿದ್ಯಾರ್ಥಿಯ ಸ್ವಂತ ಸ್ಥಳ ನಗರ/ಪಟ್ಟಣ ಆಗಿದ್ದು, ಅವರು ಬೇರೆ ನಗರ/ಪಟ್ಟಣದಲ್ಲಿ ಇರುವ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿದ್ದಲ್ಲಿ, ಅಂತಹವರು ಈ ಸೌಲಭ್ಯಕ್ಕೆ ಅರ್ಹರಿರುತ್ತಾರೆ.

(ಇ) ಈ ಯೋಜನೆಯಡಿ ಪ್ರಥಮ ಬಾರಿಗೆ ಸೌಲಭ್ಯವನ್ನು ಪಡೆಯಲು, ಈ ಹಿಂದಿನ ವರ್ಷದ ವಾರ್ಷಿಕ ಪರೀಕ್ಷೆಯಲ್ಲಿ, ಈ ಕೆಳಗಿನಂತೆ ಕನಿಷ್ಠ ಅಂಕಗಳನ್ನು ಪಡೆದು ಉತ್ತೀರ್ಣರಾಗಿರಬೇಕು.

ಪ್ರವರ್ಗ-1 – 40%
ಪ್ರವರ್ಗ-2ಎ, 3ಎ 3ಬಿ – 50%

(ಈ) ನವೀಕರಣ ವಿದ್ಯಾರ್ಥಿಗಳು ಈ ಯೋಜನೆ ಸೌಲಭ್ಯಕ್ಕೆ ಅರ್ಹರಾಗಲು, ಅವರು ಈ ಹಿಂದಿನ ವರ್ಷದ ವಾರ್ಷಿಕ ಪರೀಕ್ಷೆಯಲ್ಲಿ, ಈ ಕೆಳಗಿನಂತೆ ಕನಿಷ್ಠ ಅಂಕಗಳನ್ನು ಪಡೆದು ಉತ್ತೀರ್ಣರಾಗಿರಬೇಕು.

ಪ್ರವರ್ಗ-1 – 50%
ಪ್ರವರ್ಗ-2ಎ, 3ಎ 3ಬಿ – 60%

3. (ಅ) ಸಮಾನ ಕೋರ್ಸುಗಳಲ್ಲಿ ಒಂದಕ್ಕಿಂತ ಹೆಚ್ಚು ಬಾರಿ ವ್ಯಾಸಂಗ ಮಾಡುತ್ತಿದ್ದಲ್ಲಿ, ಅಂತಹವರು ಅರ್ಹರಿರುವುದಿಲ್ಲ. (ಉದಾ: ಬಿ.ಎ ನಂತರ ಬಿ.ಕಾಂ, ಎಂ.ಎ. (ಕನ್ನಡ) ನಂತರ ಎಂ.ಎ. (ಇಂಗ್ಲೀಷ್), ಬಿ.ಎಡ್ ನಂತರ ಎಲ್.ಎಲ್.ಬಿ. ಇತ್ಯಾದಿಗಳಿಗೆ ಪ್ರವೇಶ ಪಡೆದಿದ್ದಲ್ಲಿ)

(ಆ) ಸ್ನಾತಕೋತ್ತರ / ವೈದ್ಯಕೀಯ ಕೋರ್ಸುಗಳಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳು ಕೋರ್ಸಿನ ಅವಧಿಯಲ್ಲಿ ಮೆಡಿಕಲ್ ಪ್ರಾಕ್ಟೀಸ್ ಮಾಡುತ್ತಿದ್ದಲ್ಲಿ, ಈ ಸೌಲಭ್ಯಕ್ಕೆ ಅರ್ಹರಿರುವುದಿಲ್ಲ.

(ಇ) ಕಲೆ, ವಿಜ್ಞಾನ ಹಾಗೂ ವಾಣಿಜ್ಯ ಕೋರ್ಸುಗಳ ಪದವಿ ಅಥವಾ ಸ್ನಾತಕೋತ್ತರ ಪದವಿಗಳಲ್ಲಿ ಉತ್ತೀರ್ಣ/ಅನುತ್ತೀರ್ಣರಾದವರು ಅಂಗೀಕೃತ ವೃತ್ತಿಪರ ಅಥವಾ ತಾಂತ್ರಿಕ ಸರ್ಟಿಫಿಕೇಟ್, ಡಿಪ್ಲೋಮ, ಪದವಿ ಕೋರ್ಸುಗಳಲ್ಲಿ ವ್ಯಾಸಂಗ ಮಾಡಿದ್ದಲ್ಲಿ, ಹಾಗೂ ಇತರೆ ರೀತಿ ಅರ್ಹರಿದ್ದಲ್ಲಿ ಅವರು ಈ ಯೋಜನೆಯ ಅಡಿ ಸೌಲಭ್ಯಗಳಿಗೆ ಅರ್ಹರಿರುತ್ತಾರೆ. ಒಂದಕ್ಕಿಂತ ಹೆಚ್ಚು ಬಾರಿ ಕೋರ್ಸುಗಳ ಬದಲಾವಣೆ ಮಾಡಿಕೊಂಡವರು ಅರ್ಹರಿರುವುದಿಲ್ಲ.

(ಈ) ಒಂದೇ ಕುಟುಂಬದ ಇಬ್ಬರು ಗಂಡು ಮಕ್ಕಳು ಮಾತ್ರ ಈ ಯೋಜನೆಗೆ ಅರ್ಹರು. ಆದರೆ, ಈ ನಿರ್ಬಂಧ ಹೆಣ್ಣು ಮಕ್ಕಳಿಗೆ ಅನ್ವಯಿಸುವುದಿಲ್ಲ.

4. ಈ ಸೌಲಭ್ಯ ಪಡೆಯಲು ಇಚ್ಚಿಸುವ ವಿದ್ಯಾರ್ಥಿಗಳು ಅವರ ಹೆಸರಿನಲ್ಲಿ ಆಧಾರ್ ಸಂಖ್ಯೆಯನ್ನು ನಮೂದಿಸುವುದು.

## III. ಅರ್ಜಿ ಸಲ್ಲಿಸುವ ವಿಧಾನ:

(ಅ) ಈ ಯೋಜನೆಯಡಿ ಸಹಾಯಧನ ಪಡೆಯಲು ಇಚ್ಚಿಸುವ ಹಾಗೂ ಅರ್ಹತೆಯುಳ್ಳ ವಿದ್ಯಾರ್ಥಿಗಳು, ನಿಗದಿತ ಅರ್ಜಿ ನಮೂನೆಯಲ್ಲಿ, ಆನ್‌ಲೈನ್ ಮೂಲಕ ಎಲ್ಲಾ ವಿವರಗಳನ್ನು ನಮೂದಿಸಿ, ಅರ್ಜಿ ಸಲ್ಲಿಸಬೇಕು.

(ಆ) ಅರ್ಜಿಯೊಂದಿಗೆ ಲಗತ್ತಿಸಬೇಕಾದ ಎಲ್ಲಾ ಮೂಲ ದಾಖಲೆಗಳನ್ನು ಸ್ಕ್ಯಾನ್(Scan) ಮಾಡಿ, ಅಪ್‌ಲೋಡ್ (Upload) ಮಾಡಬೇಕು.

.....3

## ಕಾಲೇಜು ಪ್ರಾಂಶುಪಾಲರು ಮತ್ತು ಇಲಾಖೆಯ "ಪರಿಶೀಲನಾ ಅಧಿಕಾರಿ" ಕೈಗೊಳ್ಳಬೇಕಾದ ಕ್ರಮಗಳು:

(ಅ) ಆ ಕಾಲೇಜಿನ ವಿದ್ಯಾರ್ಥಿಗಳು ಆನ್‌ಲೈನ್ ಮೂಲಕ ಸಲ್ಲಿಸುವ ಅರ್ಜಿಗಳ ಸ್ವೀಕೃತಿ ಪತ್ರ ಮತ್ತು ಅಪ್‌ಲೋಡ್ ಮಾಡಿರುವ ಎಲ್ಲಾ ದಾಖಲೆಗಳ ದೃಢೀಕೃತ ಪ್ರತಿಗಳನ್ನು ವಿದ್ಯಾರ್ಥಿಗಳಿಂದ ಪಡೆದುಕೊಳ್ಳಬೇಕು. ಸದರಿ ಮಾಹಿತಿಯನ್ನು ಅವರು ಸಲ್ಲಿಸಿರುವ ದಾಖಲೆಗಳನ್ನು ಕಾಲೇಜಿನಲ್ಲಿ ಲಭ್ಯವಿರುವ ಮಾಹಿತಿಗಳೊಂದಿಗೆ ಪರಿಶೀಲಿಸಿ ಆನ್‌ಲೈನ್‌ನಲ್ಲಿ ದೃಢೀಕರಿಸಬೇಕು. ಈ ರೀತಿ ದೃಢೀಕರಿಸಲ್ಪಟ್ಟ ಪಟ್ಟಿಯ ಹಾರ್ಡ್ ಪ್ರತಿಯನ್ನು ಡೌನ್‌ಲೋಡ್ ಮಾಡಿಕೊಂಡು, ಪ್ರತಿ ವಿದ್ಯಾರ್ಥಿವಾರು ಅಗತ್ಯ ದಾಖಲಾತಿಗಳನ್ನು ಅನುಕ್ರಮವಾಗಿ ಜೋಡಿಸಿ ಸಿದ್ದಪಡಿಸಿಟ್ಟುಕೊಳ್ಳಬೇಕು.

(ಆ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕೃತ "ಪರಿಶೀಲನಾ ಅಧಿಕಾರಿ" ಕಾಲೇಜಿನ ಪ್ರಾಂಶುಪಾಲರು ಈ ಮೇಲಿನಂತೆ ಸಿದ್ದಪಡಿಸಿದ ದೃಢೀಕೃತ ಪಟ್ಟಿಯಲ್ಲಿ ನಮೂದಾಗಿರುವ ಎಲ್ಲಾ ವಿದ್ಯಾರ್ಥಿಗಳ ದಾಖಲಾತಿಗಳು ಸರಿ ಇರುವ ಬಗ್ಗೆ ಹಾಗೂ ಈ ಸೌಲಭ್ಯಕ್ಕೆ ಅವರು ಅರ್ಹರಿರುವ ಬಗ್ಗೆ ಆನ್‌ಲೈನ್‌ನಲ್ಲಿ ದೃಢೀಕರಿಸಬೇಕು. ಸದರಿ ದಾಖಲಾತಿಗಳನ್ನು ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿಗೆ ಸಲ್ಲಿಸಬೇಕು.

(ಇ) ತಾಲ್ಲೂಕು ಮಟ್ಟದ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಮತ್ತೊಮ್ಮೆ ಪರಿಶೀಲನೆ ಮಾಡಿ ಅರ್ಹ ವಿದ್ಯಾರ್ಥಿಗಳಿಗೆ "ಊಟ ಮತ್ತು ವಸತಿ ಸಹಾಯ"ವನ್ನು ಮಂಜೂರು ಮಾಡುವ ಸಂಬಂಧ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಲಾಗಿನ್‌ಗೆ ವರ್ಗಾಯಿಸಬೇಕು.

(ಈ) ಈ ಮೇಲಿನಂತೆ ಅರ್ಹ ವಿದ್ಯಾರ್ಥಿಗಳಿಗೆ ಸಂಬಂಧಿಸಿದಂತೆ, ಪ್ರಾಂಶುಪಾಲರು ಪ್ರತಿ ತಿಂಗಳ ಹಾಜರಾತಿಯನ್ನು ಅವರ ಹೆಸರು ಮತ್ತು ತರಗತಿಯ ವಿವರಗಳನ್ನು ನಮೂದಿಸಿ ದೃಢೀಕರಿಸಿ, ನಂತರದ ತಿಂಗಳ ಮೊದಲನೇ ವಾರದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವೆಬ್‌ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡಬೇಕು.

## V. ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿಗಳು ಅನುದಾನವನ್ನು ಮರು ಹಂಚಿಕೆ ಮಾಡಲು ಅನುಸರಿಸಬೇಕಾದ ಕಾರ್ಯವಿಧಾನ:

1. ಅರ್ಜಿ ಸಲ್ಲಿಸಿರುವ ಎಲ್ಲಾ ಅರ್ಹ ಅಲೆಮಾರಿ/ ಅರೆ ಅಲೆಮಾರಿ ಜನಾಂಗದ ವಿದ್ಯಾರ್ಥಿಗಳನ್ನು ಧನ ಸಹಾಯಕ್ಕಾಗಿ ಪರಿಗಣಿಸುವುದು.
2. ಉಳಿಕೆಯಾಗುವ ಅನುದಾನವನ್ನು ಈ ಕೆಳಗಿನಂತೆ ಪ್ರವರ್ಗವಾರು ಹಂಚಿಕೆ ಮಾಡುವುದು.

| | |
|---|---|
| ಪ್ರವರ್ಗ – 1 | ಶೇಕಡಾ – 15 |
| ಪ್ರವರ್ಗ – 2ಎ | ಶೇಕಡಾ – 52 |
| ಪ್ರವರ್ಗ – 3ಎ | ಶೇಕಡಾ – 14 |
| ಪ್ರವರ್ಗ – 3ಬಿ | ಶೇಕಡಾ – 18 |
| ಇತರೆ ಒಬಿಸಿ ( OTH – OBCs) | ಶೇಕಡಾ – 1 |
| ಒಟ್ಟು | ಶೇಕಡಾ – 100 |

ಟಿ. ಶ್ಯಾಮ್. ಇಂತ್ಯಾರ್,

ಒಂದು ವೇಳೆ ಇತರೆ ಒಬಿಸಿ ಸಮುದಾಯದವರಿಗೆ ನಿಗದಿಪಡಿಸಲಾದ ಮೊತ್ತ ಈ ಸಮುದಾಯದ ಅರ್ಹ ವಿದ್ಯಾರ್ಥಿಗಳಿಗೆ ಮಂಜೂರು ಮಾಡಿ ಉಳಿದ್ದಲ್ಲಿ, ಅದನ್ನು ಪ್ರವರ್ಗ – 2ಎ ವಿದ್ಯಾರ್ಥಿಗಳಿಗೆ ಬಳಸಿಕೊಳ್ಳುವುದು.

3. ಮೇಲ್ಕಾಣಿಸಿದ ಎಲ್ಲಾ ಪ್ರವರ್ಗಗಳಲ್ಲಿ ಕನಿಷ್ಠ ಶೇಕಡಾ 33 ರಷ್ಟು ವಿದ್ಯಾರ್ಥಿನಿಯರಿಗೆ ಧನ ಸಹಾಯವನ್ನು ಮಂಜೂರು ಮಾಡುವುದು. ಯಾವುದೇ ಪ್ರವರ್ಗಗಳಲ್ಲಿ ವಿದ್ಯಾರ್ಥಿನಿಯರ ಸಂಖ್ಯಾ ಕೊರತೆಯಿಂದ ಅನುದಾನ ಉಳಿಕೆಯಾದಲ್ಲಿ ಅದೇ ಪ್ರವರ್ಗದ ವಿದ್ಯಾರ್ಥಿಗಳಿಗೆ ಧನ ಸಹಾಯ ಮಂಜೂರು ಮಾಡುವುದು.
4. ಧನ ಸಹಾಯ ಮಂಜೂರಾತಿಯಲ್ಲಿ ಕನಿಷ್ಟ ಶೇಕಡಾ 3 ರಷ್ಟು ಅನುದಾನವನ್ನು ವಿಕಲಚೇತನ ವಿದ್ಯಾರ್ಥಿಗಳಿಗೆ ಮೀಸಲಿಡಬೇಕು.
5. ಆಯಾ ಆರ್ಥಿಕ ವರ್ಷಕ್ಕೆ ಲಭ್ಯವಾಗುವ ಅನುದಾನದ ಮಿತಿಗೆ ಒಳಪಟ್ಟು, ಅರ್ಹತೆ ಮತ್ತು ಆದಾಯಕ್ಕೆ (Merit cum Means) ಅನುಗುಣವಾಗಿ ಮಂಜೂರು ಮಾಡಬೇಕು.

**VI. ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಮಂಜೂರು ಮಾಡುವ ಕಾರ್ಯವಿಧಾನ: (ಮೊದಲು ತಾಲ್ಲೂಕು ವಿಸ್ತರಣಾಧಿಕಾರಿಯು ಮಂಜೂರಾತಿ ಪ್ರಾಧಿಕಾರವಾಗಿದ್ದು ಶುಲ್ಕ ವಿನಾಯಿತಿಯಂತೆಯೇ ಸದರಿ ಕಾರ್ಯಕ್ರಮಕ್ಕೂ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳನ್ನು ಮಂಜೂರಾತಿ ಪ್ರಾಧಿಕಾರವನ್ನಾಗಿ ಮಾಡಲು ಸೂಚಿಸಲಾಗಿದೆ.)**

(ಅ). ಆಯಾ ಜಿಲ್ಲೆಗೆ ಆಯಾ ಆರ್ಥಿಕ ವರ್ಷದಲ್ಲಿ ಲಭ್ಯವಿರುವ ಅನುದಾನವನ್ನು ಹಿಂದುಳಿದ ವರ್ಗಗಳ ಪ್ರವರ್ಗಗಳ ವಿದ್ಯಾರ್ಥಿಗಳಿಗೆ ಅರ್ಹತೆ ಮತ್ತು ಆದಾಯಕ್ಕೆ (Merit cum Means) ಅನುಗುಣವಾಗಿ ~~ವಿದ್ಯಾರ್ಥಿಗಳ ಮೆರಿಟ್~~ ಪಟ್ಟಿಯನ್ನು ತಯಾರಿಸಬೇಕು.

(ಆ) ಒಂದು ತಿಂಗಳ ಸಹಾಯಧನವನ್ನು ಆ ವಿದ್ಯಾರ್ಥಿಯ ಖಾತೆಗೆ ಜಮಾ ಮಾಡಬೇಕಾಗಿದ್ದಲ್ಲಿ, ಆ ವಿದ್ಯಾರ್ಥಿಯ ಹಿಂದಿನ ತಿಂಗಳ, ಕಾಲೇಜಿನ ಹಾಜರಾತಿ ಕನಿಷ್ಠ ಶೇ.75ರಷ್ಟು ಇರಬೇಕು. ಆದರೆ, ಈ ನಿರ್ಬಂಧ ಶೈಕ್ಷಣಿಕ ವರ್ಷದ ಮಧ್ಯದಲ್ಲಿ ಬರುವ ಸಾರ್ವತ್ರಿಕ ರಜಾ ದಿನಗಳಿಗೆ ಅನ್ವಯಿಸುವುದಿಲ್ಲ.

(ಇ). ನವೀಕರಣ ಹಾಗೂ ಹೊಸ ವಿದ್ಯಾರ್ಥಿಗಳಿಗೆ ಸಂಬಂಧಿಸಿದಂತೆ, ಶೈಕ್ಷಣಿಕ ವರ್ಷದಲ್ಲಿ ತರಗತಿಗಳು ಪ್ರಾರಂಭವಾದ ತಿಂಗಳಿನಿಂದ ನಂತರದ 10 ತಿಂಗಳ ಅವಧಿಗೆ ಅಥವಾ ಕೋರ್ಸು ಮುಕ್ತಾಯವಾಗುವ ತಿಂಗಳವರೆಗೆ, ಇವುಗಳಲ್ಲಿ ಯಾವುದು ಕಡಿಮೆಯೋ ಆ ಅವಧಿಗೆ ಈ ಸೌಲಭ್ಯವನ್ನು ಮಂಜೂರು ಮಾಡಬೇಕು. ಆದರೆ ವಿದ್ಯಾರ್ಥಿಯು ಕೋರ್ಸಿನ ಪ್ರಾರಂಭದ ಹಾಗೂ ಅಂತಿಮ ತಿಂಗಳುಗಳಲ್ಲಿ ಕನಿಷ್ಠ 15 ದಿನಗಳ ಹಾಜರಾತಿ ಹೊಂದಿರಬೇಕು.

(ಈ). ಪ್ರಾಂಶುಪಾಲರು ವೆಬ್‌ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡಿರುವ ವಿದ್ಯಾರ್ಥಿಗಳ ತಿಂಗಳ ಹಾಜರಾತಿಯನ್ವಯ, ಶೇಕಡ 75ರಷ್ಟು ಹಾಜರಾತಿ ಇರುವ ತಿಂಗಳುಗಳಿಗೆ, ರೂ.1500/-ರಂತೆ ಊಟ ಮತ್ತು ವಸತಿ ಸಹಾಯದ ಮೊತ್ತವನ್ನು ಮಂಜೂರು ಮಾಡಬೇಕು.

(ಉ). ಪ್ರತಿ ಮಾಹೆವಾರು, ಮಂಜೂರಾತಿ ಆದೇಶ ಮತ್ತು ಬ್ಯಾಂಕುವಾರು ಬಿಲ್ಲುಗಳನ್ನು ಇಲಾಖೆಯ ವೆಬ್‌ಪೋರ್ಟಲ್‌ನಿಂದ ಡೌನ್‌ಲೋಡ್ ಮಾಡಿಕೊಂಡು, ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳ ಮೇಲು ರುಜು ಪಡೆದುಕೊಳ್ಳಬೇಕು.

(ಊ). ಸದರಿ ಬಿಲ್ಲನ್ನು, ಬ್ಯಾಂಕುವಾರು ವಿದ್ಯಾರ್ಥಿಗಳ ಬ್ಯಾಂಕ್ ಅಕೌಂಟ್ ಮತ್ತು ಐ.ಎಫ್.ಎಸ್.ಸಿ. ಕೋಡ್‌ನೊಂದಿಗೆ ಖಜಾನೆಗೆ (ಸಾಫ್ಟ್ ಪ್ರತಿಯೊಂದಿಗೆ) ಸಲ್ಲಿಸಿ, ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ನೇರವಾಗಿ ಆನ್‌ಲೈನ್ ಮೂಲಕ ಖಜಾನೆ ಏಜೆನ್ಸಿ ಬ್ಯಾಂಕ್‌ನಿಂದ ಜಮಾ ಮಾಡಲು ಕ್ರಮ ತೆಗೆದುಕೊಳ್ಳಬೇಕು.

(ಋ). ಕೋರ್ಸಿನ ಅವಧಿ ಎರಡು ಆರ್ಥಿಕ ವರ್ಷಗಳಿಗೆ ವಿಸ್ತರಣೆಯಾದಲ್ಲಿ, ಆಯಾ ಆರ್ಥಿಕ ವರ್ಷಕ್ಕೆ ಹಂಚಿಕೆಯಾದ ಅನುದಾನದಿಂದ, ಮೇಲಿನ ನಿಬಂಧನೆಗಳಿಗೆ ಒಳಪಟ್ಟು, ಈ ಸೌಲಭ್ಯವನ್ನು ಮಂಜೂರು ಮಾಡಬೇಕು.

(ಎ). ಸೆಮಿಸ್ಟರ್ ಪದ್ಧತಿ ಇರುವ ಕೋರ್ಸುಗಳಿಗೆ ಸಂಬಂಧಪಟ್ಟಂತೆ, ಆ ಶೈಕ್ಷಣಿಕ ವರ್ಷದಲ್ಲಿ ಬರುವ ಸೆಮಿಸ್ಟರುಗಳು ಎಂದರ್ಥ.

## VII. ಆದ್ಯತೆ :-

1. ಅರ್ಜಿ ಸಲ್ಲಿಸಿರುವ ಎಲ್ಲಾ ನವೀಕರಣ ವಿದ್ಯಾರ್ಥಿಗಳನ್ನು ಧನ ಸಹಾಯಕ್ಕಾಗಿ ಪರಿಗಣಿಸುವುದು.
2. ಹಿಂದುಳಿದ ವರ್ಗಗಳ ವಿದ್ಯಾರ್ಥಿ ನಿಲಯಗಳಿಗೆ ಅರ್ಜಿ ಸಲ್ಲಿಸಿದ್ದು, ವಿದ್ಯಾರ್ಥಿ ನಿಲಯಕ್ಕೆ ಪ್ರವೇಶ ಸಿಗದೇ ಇರುವ ವಿದ್ಯಾರ್ಥಿಗಳು.
3. **ವಿಶ್ವವಿದ್ಯಾಲಯಗಳ/ ಶೈಕ್ಷಣಿಕ ಸಂಸ್ಥೆಗಳ/ ಖಾಸಗಿ ವಿದ್ಯಾರ್ಥಿ ನಿಲಯಗಳಲ್ಲಿ ಶುಲ್ಕ ಪಾವತಿಸಿ ಪ್ರವೇಶ ಪಡೆದಿರುವ ವಿದ್ಯಾರ್ಥಿಗಳು**
4. ಇತರೆ ವಿದ್ಯಾರ್ಥಿಗಳು

## VIII. ತಪ್ಪು ಮಾಹಿತಿಗೆ ದಂಡ:

1. ಅರ್ಜಿದಾರರು ಅಥವಾ ಶಿಕ್ಷಣ ಸಂಸ್ಥೆಯು, ತಪ್ಪು ಮಾಹಿತಿ ನೀಡಿದ್ದಲ್ಲಿ, ಅಂತಹವರ ವಿರುದ್ಧ ನಿಯಮನುಸಾರ ಈ ಕೆಳಗಿನಂತೆ ಕ್ರಮ ತೆಗೆದುಕೊಳ್ಳಲಾಗುವುದು.
2. ಭಾರತೀಯ ದಂಡ ಸಂಹಿತೆಯ ಕಲಂ 177 ಮತ್ತು 181ರ ಪ್ರಕಾರ, ಶಿಕ್ಷೆಗೆ ಗುರಿಪಡಿಸಲಾಗುತ್ತದೆ.
3. ಕಾನೂನಿನಂತೆ ಕ್ರಮ ಜರುಗಿಸುವುದರ ಜೊತೆಗೆ, ವಿದ್ಯಾರ್ಥಿಯು ಪಡೆದ ಒಟ್ಟು ಆರ್ಥಿಕ ಸಹಾಯವನ್ನು ಆ ವಿದ್ಯಾರ್ಥಿಯಿಂದ ಅಥವಾ ಅವರ ತಂದೆ-ತಾಯಿ/ಪೋಷಕರಿಂದ, ಭೂ ಕಂದಾಯ ಬಾಕಿಯೆಂದು ವಸೂಲಿ ಮಾಡಲಾಗುವುದು.
4. ಮಂಜೂರು ಮಾಡುವ ಅಧಿಕಾರಿಗಳು ಸಹ, ನಿಯಮಗಳ ವಿರುದ್ಧ ಮಂಜೂರು ಮಾಡಿ, ಸರ್ಕಾರದ ಬೊಕ್ಕಸಕ್ಕೆ ನಷ್ಟ ಉಂಟು ಮಾಡಿದಲ್ಲಿ, ಅಂತಹವರ ವಿರುದ್ಧ ಶಿಸ್ತಿನ ಕ್ರಮ ಜರುಗಿಸುವುದಲ್ಲದೆ ಕ್ರಿಮಿನಲ್ ಮೊಕದ್ದಮೆ ಹೂಡಲಾಗುವುದು ಹಾಗೂ ಈ ರೀತಿ ತಪ್ಪಾಗಿ ಪಾವತಿಯಾದ ಮೊತ್ತವನ್ನು ಅವರ ವೇತನದಿಂದ ವಸೂಲಿ ಮಾಡಲಾಗುವುದು.

## IX. ಇತರೆ:

1. ಪ್ರವರ್ಗವಾರು ಜಾತಿಗಳ ಪಟ್ಟಿ, ಕುಟುಂಬದ ವಾರ್ಷಿಕ ವರಮಾನ, ಅರ್ಹತೆ, ಇತ್ಯಾದಿ, ಸರ್ಕಾರವು ಕಾಲ ಕಾಲಕ್ಕೆ ಹೊರಡಿಸುವ ಆದೇಶಗಳನ್ವಯ ಪರಿಷ್ಕರಣೆಗೆ ಒಳಪಟ್ಟಿರುತ್ತದೆ.
2. ಈ ಯೋಜನೆಯ ಅನುಷ್ಠಾನಕ್ಕೆ ಅಗತ್ಯವಿರುವ ಅರ್ಜಿ ನಮೂನೆ, ಕಾರ್ಯವಿಧಾನ ಇತ್ಯಾದಿಗಳನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಆಯುಕ್ತರು ನಿರ್ಧರಿಸುವುದು.

(ಆರ್.ಭಾಸ್ಕರ್)
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.